ಆ) ಹೌದು.

ಆ) ಸದರಿ ಪ್ರಸ್ತಾವನೆ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಸೂಕ್ತ ನಿರ್ಣಯವನ್ನು ತೆಗೆದುಕೊಳ್ಳಲಾಗುವುದು.

ಕಳ್ಳಂಬೆಳ್ಳ ಕ್ಷೇತ್ರದಲ್ಲಿರುವ ಸರ್ಕಾರಿ ಜೂನಿಯರ್ ಕಾಲೇಜುಗಳ ಸಂಖ್ಯೆ.

275 (711) ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ):-

ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ತುಮಕೂರು ಜಿಲ್ಲೆಯ ಕಳ್ಳಂಬೆಳ್ಳ ಕ್ಷೇತ್ರದಲ್ಲಿರುವ ಸರ್ಕಾರಿ ಜೂನಿಯರ್ ಕಾಲೇಜುಗಳ ಸಂಖ್ಯೆ ಎಷ್ಟು ?

ಆ) ಅವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಕಾಲೇಜುಗಳು ಯಾವುವು;

ಇ) ಹಾಗಿದ್ದಲ್ಲಿ,ಅವುಗಳಿಗೆ ಸ್ವಂತ ಕಟ್ಟಡ ಕಟ್ಟಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಡಾ।। ಹೆಗ್ಗಪ್ಪ ಡಿ. ಲಮಾಣಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):–

ಅ) ಐದು

1. ಮಂಚಲದೊರೆ; ಗುಬ್ಬಿ ತಾಲ್ಲೂಕು
2. ಬೋರನಕಣಿವೆ; ಚಿಕ್ಕನಾಯಕನ ಹಳ್ಳಿ :ತಾಲ್ಲೂಕು
3. ಚಿಕ್ಕನಹಳ್ಳಿ; ಸಿರಾ ತಾಲ್ಲೂಕು
4. ಬ್ರಹ್ಮಸಂದ್ರ; ಶಿರಾ ತಾಲ್ಲೂಕು
5. ಹುಳಿಯೂರು; ಚಿಕ್ಕನಾಯಕನಹಳ್ಳಿ :ತಾಲ್ಲೂಕು

ಆ) ಮೇಲೆ ಹೇಳಿರುವ ಎಲ್ಲಾ 5 ಕಾಲೇಜುಗಳೂ ಸ್ವಂತ ಕಟ್ಟಡಗಳನ್ನು ಹೊಂದಿರುತ್ತವೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಶ್ರೀನಿವಾಸಪುರ ಮತ್ತು ರಾಮದೇವನ ಹಳ್ಳಿಯಲ್ಲಿ ಪಶು ಚಿಕಿತ್ಸಾಲಯಗಳನ್ನು ತೆರೆಯಲು ವಿಳಂಬ

276 (494) ಶ್ರೀ ಆಂಜನಮೂರ್ತಿ (ನೆಲಮಂಗಲ):-

ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ನೆಲಮಂಗಲ ಕಸಬ ಹೋಬಳಿ ಶ್ರೀನಿವಾಸಪುರ ದೊಡ್ಡಬಳ್ಳಾಪುರ, ತಾಲ್ಲೂಕ್, ಮಧುರೆ ಹೋಬಳಿ ಇಸ್ಕೂರು ಹಾಗೂ ರಾಮದೇವನಹಳ್ಳಿ ಗ್ರಾಮಗಳಲ್ಲಿ ಪಶುವೈದ್ಯ ಚಿಕಿತ್ಸಾಲಯಗಳು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆಬಂದಿದೆಯೇ;

ಆ) ಹಾಗಿದ್ದಲ್ಲಿ ಇದುವರೆವಿಗೂ ಅವುಗಳನ್ನು ತೆರೆಯದಿರಲು ಕಾರಣಗಳೇನು;

ಇ) ಈ ಬಗ್ಗೆ ಸರಕಾರದವರು ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು ?

ಶ್ರೀ ಕೆ.ಎನ್. ನಾಗೇಗೌಡ (ಪಶು ಸಂಗೋಪನಾ ರಾಜ್ಯ ಸಚಿವರು):–

ಅ) ದೊಡ್ಡಬಳ್ಳಾಪುರ ತಾಲ್ಲೂಕು ಇಸ್ಕೂರು ಗ್ರಾಮದಲ್ಲಿ 1990–91ರಲ್ಲಿ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಕ್ಕೆ ಮಂಜೂರಾತಿ ಆಗಿದೆ. ನೆಲಮಂಗಲ ತಾಲ್ಲೂಕ್ ಶ್ರೀನಿವಾಸಪುರ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕ್ ರಾಮದೇವನಹಳ್ಳಿಯಲ್ಲಿ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರವನ್ನು ಪ್ರಾರಂಭಿಸಲು ಮಂಜೂರಾತಿ ನೀಡಿರುವುದಿಲ್ಲ.

ಆ) ಇಸ್ಕೂರು ಗ್ರಾಮದಲ್ಲಿ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರವನ್ನು ಪ್ರಾರಂಭಿಸಲಾಗಿದೆ. ಶ್ರೀನಿವಾಸಪುರ ಹಾಗೂ ರಾಮದೇವನ ಹಳ್ಳಿಗಳಿಗೆ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು ಮಂಜೂರಾತಿ ನೀಡದೆ ಇರುವುದರಿಂದ ಉದ್ಭವಿಸುವುದಿಲ್ಲ.

ಇ) ನಿಯಮಗಳನ್ನು ಅನುಸರಿಸಿ ಸದರಿ ಸ್ಥಳಗಳಿಗೆ ಮಂಜೂರಾತಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿರುವ ಆರೋಗ್ಯ ಕೇಂದ್ರಗಳಿಗೆ ಹಾಗೂ ಆಸ್ಪತ್ರೆಗಳಿಗೆ ಔಷಧಿ ಸರಬರಾಜಿಗಾಗಿ ಖರ್ಚಾದ ಹಣ

277 (322) ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು):-

ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) 1992–93ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದ ಆಸ್ಪತ್ರೆಗಳಿಗೆ ಔಷಧಿ ಪೂರೈಸಲು ಒದಗಿಸಿದ ಹಣ ಮತ್ತು ಖರ್ಚಾದ ಹಣವೆಷ್ಟು ?

ಆ) 1992–93ನೇ ಸಾಲಿನಲ್ಲಿ ವಿವಿಧ ಆಸ್ಪತ್ರೆಗಳಿಗೆ ವಿತರಿಸಿದ ಔಷಧಿಗಳ ಬೆಲೆ ಎಷ್ಟು ? ಹಾಗೂ ವಿತರಿಸಿದ ದಿನಾಂಕವನ್ನು ತಿಳಿಸುವುದು;

ಇ) ಔಷಧಿ ಪೂರೈಸುವಲ್ಲಿ ಆಗಿರುವ ವಿಳಂಬಕ್ಕೆ ಕಾರಣಗಳೇನು ? ಹಾಗೂ ಈ ವಿಳಂಬವನ್ನು ತಪ್ಪಿಸಲು ಸರ್ಕಾರದ ಕ್ರಮಗಳೇನು;

ಈ) ಆಯವ್ಯಯದಲ್ಲಿ ಒದಗಿಸಿರುವ ಹಣವು ಔಷಧಿ ಪೂರೈಕೆಯ ಅವಶ್ಯಕತೆಗಿಂತ ಕಡಿಮೆ ಇರುವುದನ್ನು ಸರ್ಕಾರವು ಗಮನಿಸಿದೆಯೇ;

ಉ) ಹಾಗಿದ್ದಲ್ಲಿ ಈ ಮೊತ್ತವನ್ನು ಹೆಚ್ಚಿಸಲು ಸರ್ಕಾರವು ಕೈಗೊಂಡ ಕ್ರಮವೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):–

ಅ) ಆಯವ್ಯಯದಲ್ಲಿ ನಿಗದಿಪಡಿಸಿದ ಹಣ ರೂ. 13,53,66,865–00
ಇದುವರೆವಿಗೂ ಖರ್ಚು ಮಾಡಿರುವ ಹಣ. 9,09,02,175–00

ಆ) ಪಟ್ಟಿ ಲಗತ್ತಿಸಿದೆ. ಸರಬರಾಜು ಮಾಡಿದ ದಿನಾಂಕವನ್ನು ತಿಳಿಸಲು ಕಾಲಾವಕಾಶ ಬೇಕಾಗಿದೆ.

ಇ) ಸುಮಾರು ಶೇಕಡಾ 75ರಷ್ಟು ಪ್ರಮಾಣದ ಔಷಧಿಗಳನ್ನು ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಾರ್ವಜನಿಕ ಆಸ್ಪತ್ರೆಗಳು ಜಿಲ್ಲಾ ಆಸ್ಪತ್ರೆಗಳು ಹಾಗೂ ಶೋಧಕ ಆಸ್ಪತ್ರೆಗಳಿಗೆ ಸರಬರಾಜು ಮಾಡಲಾಗಿದೆ. ಪ್ರಾಥಮಿಕ ಆರೋಗ್ಯ ಘಟಕಗಳಿಗೆ ಮಾತ್ರ ಔಷಧಗಳನ್ನು ಸರಬರಾಜು ಮಾಡಿರುವುದಿಲ್ಲ. ಕಾರಣ ಪ್ಯಾಕೇಜ್ ಇಂಡೆಂಟ್ ನಿಗದಿಪಡಿಸಿರಲಿಲ್ಲ. ಪ್ಯಾಕೇಜ್ ಇಂಡೆಂಟ್‌ನ್ನು